# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಬೆಳಗಾವಿ ಜಿಲ್ಲೆಯ ಹಿಡಕಲ್ ಜಲಾಶಯದ ಹತ್ತಿರ ರಾಜಾಲಖಮಗೌಡ ಉದ್ಯಾನಕಾಶಿ ಅಭಿವೃದ್ಧಿ ಯೋಜನೆಯ ರೂ.147.14 ಕೋಟಿಗಳ ಮೊತ್ತದ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

ಓದಲಾಗಿದೆ: ವ್ಯವಸ್ಥಾಪಕ ನಿರ್ದೇಶಕರು, ಕನೀನಿನಿ, ಇವರ ಪತ್ರ ಸಂಖ್ಯೆ: ಕನೀನಿ/Eco-tourism/vol-3/2020-21/48331, ದಿನಾಂಕ: 15.12.2021.

**ಪ್ರಸ್ತಾವನೆ:**

ಮೇಲೆ ಓದಲಾದ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ರವರು, ಬೆಳಗಾವಿ ಜಿಲ್ಲೆಯ ಹಿಡಕಲ್ ಜಲಾಶಯದ ಹತ್ತಿರ ರಾಜಾಲಖಮಗೌಡ ಉದ್ಯಾನಕಾಶಿ ಅಭಿವೃದ್ಧಿ ಯೋಜನೆಯ ರೂ.147.14 ಕೋಟಿಗಳ ಮೊತ್ತದ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆಯನ್ನು ನೀಡುವಂತೆ ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಸದರಿ ಯೋಜನೆಯಡಿ ಹಿಡಕಲ್ ಜಲಾಶಯದ ಮುಂಭಾಗದಲ್ಲಿರುವ ಸುಮಾರು 400 ಎಕರೆ ಜಾಗದಲ್ಲಿ ರಾಜಾಲಖಮಗೌಡಾ ಉದ್ಯಾನ ಕಾಶಿ ನಿರ್ಮಿಸುವ ಸಂಬಂಧ ವಿವರವಾದ ಯೋಜನೆಯಲ್ಲಿ ಉದ್ಯಾನವನ, ಸಭಾಂಗಣ, ಪಾತರಗಿತ್ತಿ ಉದ್ಯಾನ, ಸಂಗೀತ ಕಾರಂಜಿ, ತಾರಾಲಯ ಮತ್ತು ವಿಜ್ಞಾನ ಕೇಂದ್ರ, ಅಮ್ಯೂಜಮೆಂಟ್ ಪಾರ್ಕ, ಸಾಹಸ ಕ್ರೀಡೆಗಳ ಪಾರ್ಕ, ಕರಕುಶಲ ಕೇಂದ್ರ ಪ್ರವಾಸೋದ್ಯಮ ಮಾಹಿತಿ ಕೇಂದ್ರ, ರಾಜಾ ಲಖಮಗೌಡಾರವರ ಕುರಿತು ಇತಿಹಾಸ ಪರಿಚಯ, ಉಪಹಾರ ಗೃಹಗಳು , ವಸತಿ ಹಾಗೂ ಉಪಹಾರ ಕೊಠಡಿಗಳು ಹಾಗೂ ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ಕೆಲವೊಂದು ಯೋಜನೆಗಳನ್ನು ಸ್ಥಾಪಿಸಲು ಉದ್ದೇಶಿಸಲಾಗಿರುತ್ತದೆ. ಹಿಡಕಲ್ ಜಲಾಶಯದ ಸುತ್ತಮುತ್ತಲಿನ ಜಿಲ್ಲೆಗಳಿಂದ ಜಲಾಶಯವನ್ನು ವೀಕ್ಷಿಸಲು ಬರುವ ಜನರಿಗೆ ಅನುಕೂಲವಾಗುತ್ತದೆ ಹಾಗೂ ಪ್ರವಾಸೋದ್ಯಮವನ್ನು ಉತ್ತೇಜಿಸಿದಂತಾಗುತ್ತದೆ. ಹಿಡಕಲ್ ಜಲಾಶಯಕ್ಕೆ ಸಮೀಪ ಇರುವ ಗೋಕಾಕ್ ಫಾಲ್ಸ್, ಗೊಡಚಿನಮಲ್ಕಿ ಫಾಲ್ಸ್ ಗಳನ್ನು ನೋಡಲು ಬರುವ ಪ್ರವಾಸಿಗರು ಸಹಾ ರಾಜಲಖಮಗೌಡಾ ಉದ್ಯಾನ ಕಾಶಿಯನ್ನು ವೀಕ್ಷಿಸಬಹುದಾಗಿರುತ್ತದೆ. ಮಹಾರಾಷ್ಟ್ರ ರಾಜ್ಯದ ಕೊಲ್ಲಾಪೂರದ ಪ್ರಖ್ಯಾತ ಲಕ್ಷ್ಮೀ ಗುಡಿಯು ಕೇವಲ ಒಂದು ಘಂಟೆಯ ದಾರಿಯಾಗಿದ್ದು ಇದರಿಂದ ನೆರೆಯ ರಾಜ್ಯದಿಂದಲೂ ಸಹ ಜನರನ್ನು ಆಕರ್ಷಿಸಬಹುದಾಗಿದೆ ಎಂದು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ಇವರು ವರದಿ ಮಾಡಿರುತ್ತಾರೆ.

07/3/2022

ಮುಂದುವರೆದು, ಸದರಿ ಪ್ರಸ್ತಾವನೆಯನ್ನು ದಿನಾಂಕ: 10.12.2021 ರಂದು ಜರುಗಿದ 86ನೇ ಅಂದಾಜು ಪರಿಶೀಲನಾ ಸಮಿತಿ ಸಭೆಯಲ್ಲಿ ಮಂಡಿಸಲಾಗಿದ್ದು, ಸಮಿತಿಯ ಕೆಲವೊಂದು ಅಂಶಗಳನ್ನು ಅಳವಡಿಸಿಕೊಳ್ಳುವ ಷರತ್ತಿಗೊಳಪಟ್ಟು ತೀರುವಳಿ ನೀಡಿ, ನಿಗಮದ ನಿರ್ದೇಶಕರ ಮಂಡಳಿಯ ಅನುಮೋದನೆ ಪಡೆಯಲು ಶಿಫಾರಸ್ಸು ಮಾಡಿರುತ್ತದೆ ಎಂದು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ಇವರು ವರದಿ ಮಾಡಿರುತ್ತಾರೆ.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ಈ ಕೆಳಕಂಡಂತೆ ಆದೇಶಿಸಲಾಗಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ಜಸಂಇ 103 ಎನ್‌ಐಎನ್ 2021, ದಿನಾಂಕ:07.03.2022.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಬೆಳಗಾವಿ ಜಿಲ್ಲೆಯ ಹಿಡಕಲ್ ಜಲಾಶಯದ ಹತ್ತಿರ ರಾಜಾಲಖಮಗೌಡ ಉದ್ಯಾನಕಾಶಿ ಅಭಿವೃದ್ಧಿ ಯೋಜನೆಯ ರೂ.147.14 ಕೋಟಿಗಳ ಮೊತ್ತದ ವಿವರವಾದ ಯೋಜನಾ ವರದಿಗೆ ಈ ಕೆಳಕಂಡ ಷರತ್ತಿಗೊಳಪಟ್ಟು ತಾತ್ವಿಕ ಅನುಮೋದನೆ ನೀಡಿದೆ.

1. ಪ್ರಸ್ತಾಪಿತ ಕಾಮಗಾರಿಯ ಅಂದಾಜಿನಲ್ಲಿ ತಿಳಿಸಿದಂತೆ ಹಂತ-1ರಲ್ಲಿ ರೂ.93.85 ಕೋಟಿ ಮೊತ್ತದಲ್ಲಿ ಟೆಂಡರ್‌ನ್ನು 2022-23ನೇ ಸಾಲಿನ ಮೊದಲನೇ ತ್ರೈಮಾಸಿಕದಲ್ಲಿ ಮತ್ತು ಹಂತ-2ರ ರೂ. 51.07 ಕೋಟಿ ಮೊತ್ತದ ಕಾಮಗಾರಿಯ ಟೆಂಡರ್‌ನ್ನು ಹಂತ-1 ಕಾಮಗಾರಿಯನ್ನು ಸಂಪೂರ್ಣವಾಗಿ ಪೂರ್ಣಗೊಳಿಸಿದ ನಂತರ ಕೈಗೆತ್ತಿಕೊಳ್ಳುವುದು;
2. ಮುಂದುವರೆದು, ಪ್ರಸ್ತಾವನೆಗೆ ನಿಗಮ ನಿರ್ದೇಶಕರ ಮಂಡಳಿಯ ಅನುಮೋದನೆ ಪಡೆಯುವುದು ಹಾಗೂ Estimate Review Committee ಯಲ್ಲಿ ಎತ್ತಿದ ಆಕ್ಷೇಪಣೆಗಳಿಗೆ ಅನುಸರಣಾ ವರದಿ ನೀಡುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ ಸಂಖ್ಯೆ: ಆಇ 4 ಆಕೋ-1/2022(ಇ-ಆಫೀಸ್), ದಿನಾಂಕ:27.01.2022 ಮತ್ತು ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: ಪಿಡಿಎಸ್ 02 ಎಂಸಿಎಂ 2022-ಪಿಪಿಡಿ, ದಿನಾಂಕ:13.01.2022ರಲ್ಲಿ ನೀಡಿರುವ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ
07/3/2022
(ವೀರೇಂದ್ರ .ಕೆ)
ಸರ್ಕಾರದ ಅಧೀನ ಕಾರ್ಯದರ್ಶಿ (ತಾಂತ್ರಿಕ-4)
ಜಲ ಸಂಪನ್ಮೂಲ ಇಲಾಖೆ.

**<u>ಪ್ರತಿಯನ್ನು:</u>**

1) ಮಹಾಲೇಖಪಾಲರು (ಎ & ಇ ) (ಇ & ಆರ್ ಎಸ್ ಎ ) ಜಿ & ಎಸ್ ಎಸ್ ಎ ) ಕರ್ನಾಟಕ, ಬೆಂಗಳೂರು.

2) ಮಾನ್ಯ ಮುಖ್ಯಮಂತ್ರಿಯವರ ಆಪ್ತ ಕಾರ್ಯದರ್ಶಿಯವರು, ವಿಧಾನಸೌಧ, ಬೆಂಗಳೂರು.
3) ಮಾನ್ಯ ಜಲಸಂಪನ್ಮೂಲ ಸಚಿವರ ಆಪ್ತ ಕಾರ್ಯದರ್ಶಿಯವರು, ವಿಧಾನಸೌಧ, ಬೆಂಗಳೂರು.
4) ಮಾನ್ಯ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ (ಸಚಿವ ಸಂಪುಟ ಶಾಖೆ), ವಿಧಾನಸೌಧ, ಬೆಂಗಳೂರು (ಸಚಿವ ಸಂಪುಟ ಸಂಖ್ಯೆ :ಸಿ:535, ದಿನಾಂಕ:20.12.2021ರ ಮೇರೆಗೆ)
5) ಸರ್ಕಾರದ ಜಂಟಿ ಕಾರ್ಯದರ್ಶಿ, (ಸಚಿವ ಸಂಪುಟ ಶಾಖೆ), (ಸಚಿವ ಸಂಪುಟ ಸಂಖ್ಯೆ:ಸಿ:535, ದಿನಾಂಕ:20.12.2021ರ ಮೇರೆಗೆ)
6) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
7) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
8) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಯವರು, ಜಲ ಸಂಪನ್ಮೂಲ ಇಲಾಖೆ, ವಿಕಾಸಸೌಧ, ಬೆಂಗಳೂರು.
9) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಯವರು, ಯೋಜನಾ ಇಲಾಖೆ, ವಿಕಾಸಸೌಧ, ಬೆಂಗಳೂರು.
10) ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಯವರು, ಜಲ ಸಂಪನ್ಮೂಲ ಇಲಾಖೆ, ವಿಕಾಸಸೌಧ, ಬೆಂಗಳೂರು.
11) ಸರ್ಕಾರದ ಹೆಚ್ಚುವರಿ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಜಲ ಸಂಪನ್ಮೂಲ ಇಲಾಖೆ, ವಿಕಾಸಸೌಧ, ಬೆಂಗಳೂರು.
12) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಬೆಂಗಳೂರು.
13) ಮುಖ್ಯ ಇಂಜಿನಿಯರ್, ಕರ್ನಾಟಕ ನೀರಾವರಿ ನಿಗಮ ನಿಯಮಿತ ನೀರಾವರಿ (ಉತ್ತರ) ಬೆಳಗಾವಿ.
14) ಮುಖ್ಯ ಇಂಜಿನಿಯರ್, ಜಲಸಂಪನ್ಮೂಲ ಅಭಿವೃದ್ಧಿ ಸಂಸ್ಥೆ, ಬೆಂಗಳೂರು,
15) ವಿಶೇಷಾಧಿಕಾರಿ ಮತ್ತು ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿಗಳು, ಲೋಕೋಪಯೋಗಿ ಇಲಾಖೆ ( ಆರ್ಥಿಕ ಕೋಶ), ವಿಧಾನಸೌಧ, ಬೆಂಗಳೂರು.
16) ಸರ್ಕಾರದ ಉಪ ಕಾರ್ಯದರ್ಶಿ (ಕೆಬಿಜೆಎನ್), ಜಲ ಸಂಪನ್ಮೂಲ ಇಲಾಖೆ, ವಿಕಾಸಸೌಧ, ಬೆಂಗಳೂರು.
17) ತಾಂತ್ರಿಕ ಸಹಾಯಕರು, ಜಲಸಂಪನ್ಮೂಲ ಇಲಾಖೆ, ವಿಕಾಸ ಸೌಧ, ಬೆಂಗಳೂರು.
18) ಶಾಖಾ ರಕ್ಷಾ ಕಡತ/ ಹೆಚ್ಚಿನ ಪ್ರತಿ.